Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

31.03.2026 18.40 hrs

***************

ಮುಖ್ಯಾಂಶಗಳು

- ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದಿನಿಂದ ರಾಜ್ಯ ಪ್ರವಾಸ; ನಾಳೆ ತುಮಕೂರಿನಲ್ಲಿ ಶಿವಕುಮಾರ ಸ್ವಾಮೀಜಿ ೧೧೯ನೇ ಜಯಂತಿಯಲ್ಲಿ ಭಾಗಿ
- ದೇಶದಾದ್ಯಂತ ನಾಳೆಯಿಂದ ಮೊದಲ ಹಂತದ ಜನಗಣತಿ-೨೦೨೭ ಆರಂಭ; ಸಾರ್ವಜನಿಕರು ಸಹಕರಿಸುವಂತೆ ಜಿಲ್ಲಾಡಳಿತ ಮನವಿ
- ಗರಿಗೆದರಿದ ಉಪಚುನಾವಣೆ; ಬಾಗಲಕೋಟೆ, ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳಲ್ಲಿ ಅಭ್ಯರ್ಥಿಗಳ ಪರ ಬಿರುಸಿನ ಪ್ರಚಾರ
- ತುಮಕೂರಿನ ಸಿರಾದಲ್ಲಿ ಅಕಾಲಿಕ ಮಳೆಯಿಂದ ಬೆಳಹಾನಿ; ಗೃಹ ಸಚಿವ ಡಾ.ಜಿ.ಪರಮೇಶ್ವರ್ ಪರಿಶೀಲನೆ
- ಹುಬ್ಬಳ್ಳಿ-ಬೆಂಗಳೂರು-ಹೈದರಾಬಾದ್ ನಡುವೆ ಏಪ್ರಿಲ್ ೨ನೇ ವಾರದಿಂದ ಫ್ಲೈ-೯೧ ವಿಮಾನ ಸೇವೆ ಆರಂಭ- ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಸ್ಪಷ್ಟನೆ

***************

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಇಂದು ರಾತ್ರಿ ಬೆಂಗಳೂರಿನಗೆ ಆಗಮಿಸಲಿದ್ದಾರೆ.

ಎಚ್.ಎ.ಎಲ್ ವಿಮಾನ ನಿಲ್ದಾಣಕ್ಕೆ ಆಗಮಿಸಲಿರುವ ಅವರು, ಲೋಕಭವನದಲ್ಲಿ ತಂಗಲಿದ್ದಾರೆ. ಈ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ಬಿಗಿ ಭದ್ರತೆ ಏರ್ಪಡಿಸಲಾಗಿದೆ.

ನಾಳೆ ತುಮಕೂರಿನ ಸಿದ್ಧಗಂಗಾ ಮಠದಲ್ಲಿ ನಡೆಯಲಿರುವ ಶಿವಕುಮಾರ ಸ್ವಾಮೀಜಿಗಳ ೧೧೯ನೇ ಜಯಂತಿ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

ಮುನ್ನೆಚ್ಚರಿಕಾ ಕ್ರಮವಾಗಿ ತುಮಕೂರಿನಲ್ಲಿ ಬಿಗಿಭದ್ರತೆ ಏರ್ಪಡಿಸಲಾಗಿದ್ದು, ೧೫ ಸಾವಿರ ಪೊಲೀಸ್ ಸಿಬ್ಬಂದಿ ನಿಯೋಜಿಸಲಾಗಿದೆ. ತುಮಕೂರು ನಗರದಲ್ಲಿ ವಾಹನ ಸಂಚಾರವನ್ನು ಮಾರ್ಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ಶುಭ್ ಕಲ್ಯಾಣ್ ಸೂಚಿಸಿದ್ದಾರೆ.

***************

ನಾಳೆಯಿಂದ ದೇಶದಾದ್ಯಂತ ಜನಗಣತಿ ಆರಂಭವಾಗಲಿದೆ. ಇದು ಸ್ವಾತಂತ್ರ ನಂತರದ ೮ ನೇ ಜನಗಣತಿಯಾಗಿದೆ. ಈ ಬಾರಿ ೨ ಹಂತಗಳಲ್ಲಿ ಜನಗಣತಿ ನಡೆಯಲಿದೆ.

ಮೊದಲ ಹಂತದಲ್ಲಿ ಏಪ್ರಿಲ್ ೧ ರಿಂದ ಸೆಪ್ಟಂಬರ್ ೩೦ರವರೆಗೆ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮನೆಗಳ ಪಟ್ಟಿ ಮತ್ತು ಸ್ವಯಂಗಣತಿ ನಡೆಯಲಿವೆ. ಎರಡನೇ ಹಂತದಲ್ಲಿ ಜಾತಿ ಗಣತಿ ಹಮ್ಮಿಕೊಳ್ಳಲಾಗಿದೆ.

ಹಾವೇರಿ ಜಿಲ್ಲೆಯಲ್ಲಿ ನಾಳೆಯಿಂದ ಸ್ವಯಂ ಗಣತಿಯೊಂದಿಗೆ 'ಜನಗಣತಿ-೨೦೨೭' ಆರಂಭವಾಗಲಿದ್ದು, ಏಪ್ರಿಲ್ ೧೬ರಿಂದ ಒಂದು ತಿಂಗಳು 'ಮನೆಗಳ ಪಟ್ಟಿ ತಯಾರಿಕೆ ಮತ್ತು ವಸತಿ ಗಣತಿ' ನಡೆಯಲಿದೆ ಎಂದು ಜಿಲ್ಲಾ ಪ್ರಧಾನ ಜನಗಣತಿ ಅಧಿಕಾರಿ ಡಾ. ವಿಜಯಮಾಹಾಂತೇಶ್ ದಾನಮ್ಮನವರ ತಿಳಿಸಿದ್ದಾರೆ.

ವಿಜಯಪುರ ಜಿಲ್ಲೆಯ ಜನತೆ ಜನಗಣತಿಯ ಸದುಪಯೋಗ ಪಡೆದುಕೊಂಡು ಗಣತಿಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಜಿಲ್ಲಾಧಿಕಾರಿ ಡಾ. ಆನಂದ ಕೆ ಮನವಿ ಮಾಡಿದ್ದಾರೆ.

ಭಾರತ ಜನಗಣತಿ-೨೦೨೭ರ ಅಂಗವಾಗಿ ಸಾರ್ವಜನಿಕರು ತಾವಾಗಿಯೇ ಮಾಹಿತಿ ನೀಡುವ "ಸ್ವಯಂ ಗಣತಿ" ಪ್ರಕ್ರಿಯೆಯು ೨೦೨೬ರ ಏಪ್ರಿಲ್ ೧ ರಿಂದ ಆರಂಭವಾಗಲಿದೆ ಎಂದು ವಿಜಯನಗರ ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ತಿಳಿಸಿದ್ದಾರೆ.

ಬಳ್ಳಾರಿ ಜಿಲ್ಲೆಯಲ್ಲಿ ಮನೆ ಪಟ್ಟಿ ಮತ್ತು ಮನೆಗಣತಿ ಕಾರ್ಯವು ಏಪ್ರಿಲ್ ೧೬ ರಿಂದ ಆರಂಭವಾಗಿ ಮೇ ೧೫ ರವರೆಗೆ ನಡೆಯಲಿದೆಂದು ಜಿಲ್ಲಾಧಿಕಾರಿ ಕೆ.ನಾಗೇಂದ್ರ ಪ್ರಸಾದ್ ಮಾಹಿತಿ ನೀಡಿದ್ದಾರೆ.

ನಾಳೆಯಿಂದ ಏಪ್ರಿಲ್ ೧೫ರವರೆಗೆ ಸ್ವಯಂ ಗಣತಿ ಕಾರ್ಯಕ್ಕೆ ಅವಕಾಶ ಕಲ್ಪಿಸಲಾಗಿದ್ದು, ಜನತೆ ವೆಬ್ ಪೋರ್ಟಲ್‌ನಲ್ಲಿ ತಮ್ಮ ಮಾಹಿತಿಯನ್ನು ನಮೂದಿಸಬಹುದಾಗಿದೆ ಎಂದು ತಿಳಿಸಿದ್ದಾರೆ.

***************

ರಾಜ್ಯದಲ್ಲಿ ವಿಧಾನಸಭಾ ಉಪಚುನಾವಣೆ ಬಿರುಸುಗೊಂಡಿದೆ.

ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎರಡನೇ ದಿನ ಕ್ಷೇತ್ರದ ವಿವಿಧೆಡೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಉಮೇಶ್ ಮೇಟಿ ಪರ ಪ್ರಚಾರ ನಡೆಸಿದರು.

ಈ ವೇಳೆ ಮಾತನಾಡಿದ ಅವರು, ಬಾಗಲಕೋಟೆಯಲ್ಲಿ ನಿರೀಕ್ಷೆಗೂ ಮೀರಿ ಜನಬೆಂಬಲ ವ್ಯಕ್ತವಾಗುತ್ತಿದೆ ಎಂದು ತಿಳಿಸಿದರು.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಬಾಗಲಕೋಟೆ ನಗರದಲ್ಲಿನ ವಿವಿಧ ವಾರ್ಡ್‌ಗಳಲ್ಲಿ ಬಿಜೆಪಿ ಅಭ್ಯರ್ಥಿವೀರಣ್ಣ ಚರಂತಿಮಠ ಪರ ಮನೆ-ಮನೆಗೆ ತೆರಳಿ ಮತಯಾಚಿಸಿದರು.

ಬಳಿಕ ನಡೆದ ಸಭೆಯಲ್ಲಿ ಮಾತನಾಡಿದ ವಿಜಯೇಂದ್ರ, ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

***************

ದಾವಣಗೆರೆಯಲ್ಲಿಯೂ ವಿಧಾನಸಭಾ ಉಪಚುನಾವಣೆ ಪ್ರಚಾರ ಬಿರುಸುಗೊಂಡಿದೆ. ಅಭ್ಯರ್ಥಿಗಳ ಗೆಲುವಿಗಾಗಿ ಶ್ರಮಿಸುತ್ತಿರುವ ರಾಜಕೀಯ ಪಕ್ಷಗಳ ಮುಖಂಡರು ಮನೆ ಮನೆಗೆ ತೆರಳಿ ಮತಯಾಚಿಸುತ್ತಿದ್ದಾರೆ.

ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ದಾಸಕರಿಯಪ್ಪ ಅವರ ಪರವಾಗಿ ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್.ಯಡಿಯೂರಪ್ಪ, ಬಸವರಾಜ್ ಬೊಮ್ಮಾಯಿ, ಸೇರಿದಂತೆ ಪಕ್ಷದ ಪ್ರಮುಖ ನಾಯಕರು ಕ್ಷೇತ್ರದ ಹಲವೆಡೆ ಮತಯಾಚಿಸಿದರು.

ಇನ್ನೊಂದೆಡೆ ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಮಲ್ಲಿಕಾರ್ಜುನ್ ಪರ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲ ಸೇರಿದಂತೆ ಹಲವು ಮುಖಂಡರು ಮತಯಾಚಿಸಿದರು.

ಈ ವೇಳೆ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕಾಂಗ್ರೆಸ್ ಅಭ್ಯರ್ಥಿಯ ಗೆಲುವಿನ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

***************

ಅಕಾಲಿಕ ಆಲಿಕಲ್ಲು ಮಳೆಯಿಂದ ಬೆಳೆ ಹಾನಿಯಾಗಿರುವ ಶಿರಾ ತಾಲ್ಲೂಕಿನ ಬೆಳೆಹಾನಿ ಪ್ರದೇಶಗಳಿಗೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಇಂದು ಅಧಿಕಾರಿಗಳೊಂದಿಗೆ ತೆರಳಿ ಪರಿಶೀಲನೆ ನಡೆಸಿದರು.

ಸಿರಾ ತಾಲ್ಲೂಕು ಹುಲಿಕುಂಟೆ ಹೋಬಳಿಯ ವಿವಿಧೆಡೆ ಅಕಾಲಿಕ ಆಲಿಕಲ್ಲು ಮಳೆಯಿಂದ ಫಸಲಿಗೆ ಬಂದಿದ್ದ ಅಡಿಕೆ ಮರಗಳು ಸಂಪೂರ್ಣವಾಗಿ ನಾಶವಾಗಿದೆ. ಸಿರಾ ತಾಲ್ಲೂಕಿನಲ್ಲಿ ೧ ಸಾವಿರದ

೬೦೦ ಹೆಕ್ಟೇರ್ ಪ್ರದೇಶದಲ್ಲಿ ಬೆಳೆದಿರುವ ರೇಷ್ಮೆ, ಕಟಾವು ಸಮಯದಲ್ಲಿ ಸುರಿದಿರುವ ಆಲಿಕಲ್ಲು ಮಳೆಯಿಂದಾಗಿ ನೆಲ ಕಚ್ಚಿದೆ.

ಬಳಿಕ ಮಾತನಾಡಿದ ಅವರು ಅಕಾಲಿಕ ಆಲಿಕಲ್ಲು ಮಳೆಯಿಂದಾಗಿ ದಾಳಿಂಬೆ, ರೇಷ್ಮೆ, ಮಾವು ಸೇರಿದಂತೆ ಅನೇಕ ಬೆಳೆಗಳು ಸಂಪೂರ್ಣವಾಗಿ ನಾಶವಾಗಿ ರೈತರು ತೊಂದರೆಯಲ್ಲಿ ಸಿಲುಕಿದ್ದಾರೆ. ಸರ್ಕಾರ ಬೆಳೆಹಾನಿ ಆಗಿರುವ ರೈತರ ನೆರವಿಗೆ ನಿಲ್ಲಲಿದೆ ಎಂದು ತಿಳಿಸಿದ್ದಾರೆ.

***************

ವಾಣಿಜ್ಯ ನಗರಿ ಹುಬ್ಬಳ್ಳಿ-ಧಾರವಾಡ ಸೇರಿದಂತೆ ಉತ್ತರ ಕರ್ನಾಟಕ, ಮಧ್ಯಕರ್ನಾಟಕದ ತ್ವರಿತ ಸಂಪರ್ಕಕ್ಕೆ ಅನುಕೂಲ ಆಗುವಂತೆ "ಹುಬ್ಬಳ್ಳಿ-ಬೆಂಗಳೂರು-ಹೈದರಾಬಾದ್" ನಡುವೆ ಅತಿ ಶೀಘ್ರದಲ್ಲೇ ಹೊಸದೊಂದು ವಿಮಾನ ಸೇವೆ ಲಭ್ಯವಾಗಲಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ.

ಇದೇ ಏಪ್ರಿಲ್ ಎರಡನೇ ವಾರದಿಂದಲೇ ಜಿಟರ್ಥ್೯೧ ವಿಮಾನ ಸೇವೆ ಆರಂಭವಾಗಲಿದ್ದು, ಹುಬ್ಬಳ್ಳಿ ವಿಮಾನ ನಿಲ್ದಾಣದಲ್ಲಿ ಸಂಸ್ಥೆಯ ಕಾರ್ಯಕ್ಕೆ ಸ್ಥಳಾವಕಾಶ ನೀಡಲಾಗಿದೆ. ಅಂತೆಯೇ ಈ ಸಂಸ್ಥೆ ಈಗಾಗಲೇ ವಿಮಾನಯಾನ ಸೇವೆಯ ಅಗತ್ಯ ಕಾರ್ಯ ಚಟುವಟಿಕೆ ಆರಂಭಿಸಿದೆ ಎಂದು ಅವರು ಮಾಹಿತಿ ಹಂಚಿಕೊಂಡಿದ್ದಾರೆ.

***************

ವಿಶ್ವವಿಖ್ಯಾತ ಬೆಂಗಳೂರು ಕರಗ ಶಕ್ತ್ಯೋತ್ಸವಕ್ಕೆ ಕ್ಷಣಗಣನೆ ಆರಂಭವಾಗಿದೆ.

ಕಳೆದ ರಾತ್ರಿ ಆರತಿ ದೀಪ ಬಳಿಕ ಹಸಿ ಕರಗ ನಡೆದಿದ್ದು, ಇಂದು ದ್ರೌಪದಿಗೆ ಪೊಂಗಲ್ ಸೇವೆ ನಡೆಯಲಿದೆ. ನಾಳೆ ದ್ರೌಪದಮ್ಮನ ಕರಗ ಮಹೋತ್ಸವ ನಡೆಯಲಿದೆ.

ಕೆಂಪೇಗೌಡರ ಕೋಟೆಯ ಒಳಗೆ ಸಂಚಾರ ಮಾಡಿ, ಸುಮಾರು ೨೬ ಕಿಲೋಮೀಟರ್ ಸಂಚರಿಸಿ ಕರಗ ಭಕ್ತರಿಗೆ ದರ್ಶನ ನೀಡಲಿದೆ.

ಈ ಬಾರಿ ಪೂಜಾರಿ ಜ್ಞಾನೇಂದ್ರ ೧೬ನೇ ಬಾರಿಗೆ ಕರಗ ಹೊರಲಿದ್ದಾರೆ. ತವಕ್ಕಲ್ ಮಸ್ತಾನ್ ದರ್ಗಾಕ್ಕೆ ಕರಗ ಭೇಟಿ ನೀಡಲಿದ್ದು, ದರ್ಗಾದಲ್ಲಿ ಸಿದ್ಧತೆ ಮಾಡಿಕೊಳ್ಳಲಾಗಿದೆ.

ಆದಿಶಕ್ತಿ ಸ್ವರೂಪಿಣಿಯಾದ ದ್ರೌಪದಿಯ ಆರಾಧನೆಗಾಗಿ ಕರಗ ನಡೆಯುವುದು ವಿಶೇಷವಾಗಿದೆ.

***************

ಮಂಗಳೂರು ವಿಶ್ವವಿದ್ಯಾನಿಲಯದ ಸಿಬ್ಬಂದಿ ನಿವೃತ್ತರಾದ ಬಳಿಕ ಪಿಂಚಣಿ ಸಮಸ್ಯೆ ಕಾಡದಂತೆ ಈ ಬಾರಿ ಪಿಂಚಣಿ ಟ್ರಸ್ಟ್ ನಿಧಿ ಆರಂಭಿಸಲಾಗಿದೆ ಎಂದು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಪಿ.ಎಲ್.ಧರ್ಮ ತಿಳಿಸಿದ್ದಾರೆ.

ವಿಶ್ವವಿದ್ಯಾನಿಲಯದಲ್ಲಿಂದು ಈ ಕುರಿತು ಮಾಹಿತಿ ನೀಡಿದ ಅವರು, ಈಗಾಗಲೇ ೫೦ ಲಕ್ಷ ರೂಪಾಯಿ ಮೊತ್ತದೊಂದಿಗೆ ಪಿಟಿಎಫ್ ನೋಂದಣಿ ಮಾಡಲಾಗಿದೆ. ಮಂಗಳೂರು ವಿವಿಗೆ ಬರುವ ಅನುದಾನ ಇತರ ಮೊತ್ತಗಳಲ್ಲಿ ಉಳಿಕೆಯಾದ ಮೊತ್ತವನ್ನು ಈ ನಿಧಿಗೆ ಬಳಕೆ ಮಾಡುವುದರಿಂದ ಪಿಂಚಣಿ ಸಮಸ್ಯೆಗೆ ಪರಿಹಾರ ಸಿಗಲಿದೆ ಎಂದು ಹೇಳಿದ್ದಾರೆ.

ಈ ಟ್ರಸ್ಟ್ ಮೂಲಕ ಪಿಂಚಣಿ ಸಮಸ್ಯೆ ನಿವಾರಣೆಯಾಗಲಿದೆ  ಎಂದು ಅವರು ತಿಳಿಸಿದ್ದಾರೆ.

***************

ನೈಋತ್ಯ ರೈಲ್ವೆಯು ಗುಡ್ ಫ್ರೈಡೆ ಹಾಗೂ ವಾರಾಂತ್ಯದ ಹಿನ್ನೆಲೆಯಲ್ಲಿ ಪ್ರಯಾಣಿಕರ ದಟ್ಟಣೆ ನಿಯಂತ್ರಿಸಲು, ಬೆಂಗಳೂರಿನ ಯಶವಂತಪುರ ಮತ್ತು ಕಣ್ಣೂರು ನಡುವೆ ಮಂಗಳೂರು ಜಂಕ್ಷನ್ ಮಾರ್ಗವಾಗಿ ಒಂದು ಟ್ರಿಪ್ ವಿಶೇಷ ರೈಲನ್ನು ಕಾರ್ಯಾಚರಣೆಗೊಳಿಸಲಿದೆ.

ಈ ರೈಲು ಏಪ್ರಿಲ್ ೨ ರಂದು ಬೆಳಿಗ್ಗೆ ೧೧.೫೦ಕ್ಕೆ ಯಶವಂತಪುರದಿಂದ ಹೊರಟು, ಮರುದಿನ ಮುಂಜಾನೆ ೩.೦೦ ಗಂಟೆಗೆ ಕಣ್ಣೂರು ತಲುಪಲಿದೆ. ಮರಳಿ ಪ್ರಯಾಣದಲ್ಲಿ, ಏಪ್ರಿಲ್ ೩ರ ಶುಕ್ರವಾರ ಬೆಳಿಗ್ಗೆ ೮.೪೫ಕ್ಕೆ ಕಣ್ಣೂರಿನಿಂದ ಹೊರಟು, ಅದೇ ದಿನ ರಾತ್ರಿ ೯.೩೦ಕ್ಕೆ ಯಶವಂತಪುರ ತಲುಪಲಿದೆ. ಈ ರೈಲು ಒಟ್ಟು ೨೧ ಬೋಗಿಗಳನ್ನು ಹೊಂದಿರಲಿದೆ.s

***************

ಕಾಯಕ ಯೋಗಿ, ತ್ರಿವಿಧ ದಾಸೋಹ ಮೂರ್ತಿ, ಲಿಂಗೈಕ್ಯ ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರ ೧೧೯ನೇ ಜಯಂತಿ ಹಿನ್ನೆಲೆಯಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಇಂದು ಸಿದ್ಧಗಂಗಾ ಮಠಕ್ಕೆ ಭೇಟಿ ನೀಡಿ ಶ್ರೀಗಳ ಗದ್ದುಗೆ ದರ್ಶನ ಪಡೆದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾಳೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಭಾಗವಹಿಸುತ್ತಿರುವುದು ಸ್ವಾಗತಾರ್ಹ. ಇದು ತುಮಕೂರಿನ ಮೆರಗನ್ನು ಮತ್ತಷ್ಟು ಹೆಚ್ಚಿಸಿದೆ ಎಂದು ತಿಳಿಸಿದರು.

***************

ರಾಜ್ಯದಲ್ಲಿ ಕನ್ನಡ ಆಡಳಿತ ಭಾಷೆಯಾಗಿದ್ದು, ವಿಶ್ವವಿದ್ಯಾಲಯ ಮತ್ತು ಕಾಲೇಜುಗಳಲ್ಲಿ ಕನ್ನಡ ಭಾಷೆಗೆ ಅಗೌರವ ಉಂಟಾಗದಂತೆ ಎಲ್ಲರೂ ಎಚ್ಚರವಹಿಸಬೇಕೆಂದು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಸೂಚನೆ ನೀಡಿದೆ.

ಯಾವುದೇ ಸಂದರ್ಭದಲ್ಲಿಯೂ ಕನ್ನಡ ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಗೆ ಅವಮಾನವಾಗುವ ರೀತಿಯಲ್ಲಿ ವರ್ತನೆಗಳು ನಡೆಯುವುದನ್ನು ಸಂಪೂರ್ಣವಾಗಿ ಖಂಡಿಸಲಾಗುವುದು ಎಂದು ತಿಳಿಸಿದೆ.

***************

ಸಂಕ್ಷಿಪ್ತ ಸುದ್ದಿಗಳು.

೧. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ, ದೇವನಹಳ್ಳಿ, ಹೊಸಕೋಟೆ, ನೆಲಮಂಗಲ ತಾಲೂಕುಗಳಲ್ಲಿ ಇಂದು ತ್ಯಾಗ, ಅಹಿಂಸೆಯ ಸಾಕಾರಮೂರ್ತಿ ಭಗವಾನ್ ಶ್ರೀ ಮಹಾವೀರರ ಜಯಂತಿಯನ್ನು ಶ್ರದ್ಧಾ ಭಕ್ತಿ ಸಂಭ್ರಮಗಳಿಂದ ಆಚರಿಸಲಾಯಿತು.

*******ಮುಕ್ತಾಯ********